**ಕರ್ನಾಟಕ ಸರ್ಕಾರ**

**ಕರ್ನಾಟಕ ರಾಜ್ಯ ಸಹಕಾರ ಚುನಾವಣಾ ಆಯೋಗ**

ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳದ ಕಟ್ಟಡ,
ನಂ.3, 2ನೇ ಮಹಡಿ, ಕರಿಯಪ್ಪ ರಸ್ತೆ,
ಬಸವನಗುಡಿ (ಕೃಷ್ಣರಾವ್ ಪಾರ್ಕ್ ಮುಂಭಾಗ)
ಬೆಂಗಳೂರು-560004 ದಿನಾಂಕ: 02.08.2013
6

**ವಿಷಯ:-** ಸಹಕಾರ ಸಂಘಗಳ ಆಡಳಿತ ಮಂಡಳಿಗೆ ಚುನಾವಣೆ ಎರಡು ಹಾಗೂ ಮೂರನೇ ಹಂತದಲ್ಲಿ ಕ್ರಮವಾಗಿ ಮಾಧ್ಯಮಿಕ ಮತ್ತು ಫೆಡರಲ್ ಸಂಘಗಳಿಗೆ ಚುನಾವಣೆ ನಡೆಸುವಿಕೆ – ಜಿಲ್ಲಾ ಚುನಾವಣಾಧಿಕಾರಿಗಳ ನೇಮಕ ಮಾಡುವಿಕೆ ಕುರಿತು.

**ಉಲ್ಲೇಖ:** ಆಯೋಗದ ಆದೇಶ ಸಚುಆ/16/2013-14, ದಿನಾಂಕ:01.08.2013

***

**ಪ್ರಸ್ತಾವನೆ:-**

ಸಹಕಾರ ಸಂಘಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸುವ ಸಂಬಂಧ, ಸಹಕಾರ ಚುನಾವಣಾ ಆಯೋಗವು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ (ಸಂಕ್ಷಿಪ್ತವಾಗಿ ಅಧಿನಿಯಮ) ಪ್ರಕರಣ 39 ಎ (1) ಮತ್ತು ಪ್ರಕರಣ 39 ಎಎ (2) ಅಡಿಯಲ್ಲಿ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 26 ಎ ಅಡಿಯಲ್ಲಿ ಅಂತರ್ಗತವಾದ ಅಧಿಕಾರವನ್ನು ಚಲಾಯಿಸಿ ಮೊದಲ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸಲು ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರನ್ನು ಮುಂದಿನ ಆದೇಶದವರೆಗೆ ಜಿಲ್ಲಾ ಚುನಾವಣಾಧಿಕಾರಿಯನ್ನಾಗಿ ನೇಮಿಸಿ ಉಲ್ಲೇಖಿತ ಪತ್ರದಲ್ಲಿ ಆದೇಶ ಹೊರಡಿಸಲಾಗಿತ್ತು.

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 39 ಎ (2) ರಂತೆ ಸಹಕಾರ ಸಂಘಗಳ ಮಂಡಳಿಯ ಸದಸ್ಯರ ಸಾಮಾನ್ಯ ಚುನಾವಣೆಗಳನ್ನು ಎರಡನೇ ಹಾಗೂ ಮೂರನೇ ಹಂತದಲ್ಲಿ ನಡೆಸತಕ್ಕದ್ದಾಗಿದೆ.

39ಎ(2)(ಬಿ):- ಎರಡನೇ ಹಂತದಲ್ಲಿ ಮಾಧ್ಯಮಿಕ ಸಂಘಗಳಿಗೆ ಚುನಾವಣೆಗಳನ್ನು ನಡೆಸುವುದಕ್ಕಾಗಿ ಚುನಾವಣಾ ಪ್ರಕ್ರಿಯೆಯು ಪ್ರಾಥಮಿಕ ಸಂಘಗಳ ಚುನಾವಣೆಗಳು ಪೂರ್ಣಗೊಂಡ ಹದಿನೈದು ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದು.

39ಎ(2)(ಸಿ):- ಮೂರನೇ ಹಂತದಲ್ಲಿ, ಫೆರಡಲ್ ಸಂಘಗಳ ಚುನಾವಣೆಗಳನ್ನು ನಡೆಸುವುದಕ್ಕಾಗಿ ಚುನಾವಣಾ ಪ್ರಕ್ರಿಯೆಯು ಮಾಧ್ಯಮಿಕ ಸಂಘಗಳ ಚುನಾವಣೆಗಳು ಪೂರ್ಣಗೊಂಡ ಮುವತ್ತು ದಿನಗಳ ತರುವಾಯ ಪ್ರಾರಂಭವಾಗತಕ್ಕದ್ದು.

ಅಧಿನಿಯಮ ಪ್ರಕರಣ 39ಎ(3) (ii) ರೀತ್ಯಾ ಮಾಧ್ಯಮಿಕ ಸಹಕಾರ ಸಂಘಗಳಿಗೆ ಸಂಬಂಧಪಟ್ಟಂತೆ, 2013 ರ ಅಕ್ಟೋಬರ್ 31ನೇ ದಿನಕ್ಕೆ ಮುಂಚೆ ಹಾಗೂ 39ಎ(3) (iii) ರೀತ್ಯಾ ಫೆಡರಲ್ ಸಂಘಗಳಿಗೆ ಸಂಬಂಧಪಟ್ಟಂತೆ, 2013 ರ ನವೆಂಬರ್ ಮುವತ್ತನೇ ದಿನಕ್ಕೆ ಮುಂಚೆ ಮಂಡಲಿಗಳ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸತಕ್ಕದ್ದಾಗಿದೆ. ಮೊದಲ ಹಂತದಲ್ಲಿ ಪ್ರಾಥಮಿಕ ಸಂಘಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸುವಿಕೆ ಮತ್ತು ಆ ನಂತರ ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಆಯೋಗವು ಈಗಾಗಲೇ ಅಗತ್ಯ ಶಾಸನಾತ್ಮಕ ಕ್ರಮವನ್ನು ಕೈಗೊಂಡಿದೆ ಎರಡು ಹಾಗೂ ಮೂರನೇ ಹಂತದಲ್ಲಿ ಕ್ರಮವಾಗಿ ಮಾಧ್ಯಮಿಕ ಫೆಡರಲ್ ಸಂಘಗಳ ಚುನಾವಣೆಯನ್ನು ನಡೆಸುವುದಕ್ಕಾಗಿ ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿರುತ್ತದೆ. ಮಾಧ್ಯಮಿಕ ಸಂಘಗಳಿಗೆ ಚುನಾವಣೆಗಳನ್ನು ನಡೆಸುವುದಕ್ಕೆ ಚುನಾವಣೆ ಪ್ರಕ್ರಿಯೆಯು ಪ್ರಾಥಮಿಕ ಸಂಘಗಳ ಚುನಾವಣೆಗಳು ಪೂರ್ಣಗೊಂಡ 15 ದಿನಗಳ ತರುವಾಯ

---2

ಪ್ರಾರಂಭವಾಗತಕ್ಕದ್ದಾಗಿದೆ. ಪ್ರಸ್ತುತ ಆಯೋಗವು ಕೈಗೊಂಡಿರುವ ಕ್ರಮದಂತೆ ಪ್ರಾಥಮಿಕ ಸಂಘಗಳ ಆಡಳಿತ ಮಂಡಳಿ/ ಪದಾಧಿಕಾರಿಗಳ ಚುನಾವಣೆಗಳು ಸೆಪ್ಟೆಂಬರ್ 2013ಕ್ಕೆ ಮುಂಚೆ ಪೂರ್ಣಗೊಳ್ಳುತ್ತವೆ. ಆದ ಕಾರಣ ಕಾನೂನಿನ ಅವಕಾಶದಂತೆ ಮಾಧ್ಯಮಿಕ ಹಾಗೂ ಫೆಡರಲ್ ಸಂಘಗಳ ಮಂಡಳಿ / ಪದಾಧಿಕಾರಿಗಳ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸತಕ್ಕದ್ದಾಗಿದೆ.

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 39ಎ(1) ರೀತ್ಯಾ, ಯಾವುದೇ ಆಕಸ್ಮಿಕ ಖಾಲಿಯಾದ ಸ್ಥಾನವನ್ನು ಒಳಗೊಂಡಂತೆ ಒಂದು ಸಹಕಾರ ಸಂಘದ ಮಂಡಲಿಯ ಸದಸ್ಯರ ಪ್ರತಿಯೊಂದು ಸಾಮಾನ್ಯ ಚುನಾವಣೆಯನ್ನು ಮತ್ತು ಪದಾಧಿಕಾರಿಗಳ ಚುನಾವಣೆಯನ್ನು, ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ /ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಡೆಸತಕ್ಕದಾಗಿದೆ. ಈ ಸಂಬಂಧ ಮತದಾರರ ಪಟ್ಟಿಗಳನ್ನು ತಯಾರಿಸುವ ಕಾರ್ಯವು ಸಹ ಸೇರಿರುತ್ತದೆ. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು 2013 ರ ನಿಯಮ 2(i-1) ರಂತೆ ಜಿಲ್ಲಾ ಚುನಾವಣಾಧಿಕಾರಿಯನ್ನು ಸಹಕಾರ ಚುನಾವಣಾ ಆಯೋಗವು ನೇಮಿಸಲು ಅಧಿಕಾರ ಹೊಂದಿರುತ್ತದೆ. ಸಹಕಾರ ಚುನಾವಣಾ ಆಯೋಗದ ಮೇಲುಸ್ತುವಾರಿ ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ಪ್ರತಿ ಜಿಲ್ಲೆಯ ಜಿಲ್ಲಾ ಚುನಾವಣಾಧಿಕಾರಿಯು ಜಿಲ್ಲೆಯೊಳಗೆ ನೋಂದಾಯಿತ ಕಛೇರಿಗಳನ್ನು ಮತ್ತು ವ್ಯವಹಾರದ ಪ್ರಧಾನ ಸ್ಥಳಗಳನ್ನುಳ್ಳ ಸಹಕಾರ ಸಂಘಗಳ / ಸಹಕಾರಿಗಳ ಸಾಮಾನ್ಯ ಚುನಾವಣೆಗಳನ್ನು ನಡೆಸುವುದಕ್ಕೆ ಮತ್ತು ತತ್ಸಂಬಂಧ ಮತದಾರರ ಪಟ್ಟಿಗಳನ್ನು ತಯಾರಿಸುವುದಕ್ಕೆ ಸಂಬಂಧಿಸಿದಂತೆ ಎಲ್ಲಾ ಅಂಶಗಳನ್ನು ಸಮನ್ವಯಗೊಳಿಸತಕ್ಕಾಗಿದೆ ಮತ್ತು ಮೇಲ್ವಿಚಾರಣೆ ನಡೆಸತಕ್ಕದ್ದಾಗಿದೆ. ಜಿಲ್ಲಾ ಚುನಾವಣಾಧಿಕಾರಿ, ಸದರಿ ಸಾಮಾನ್ಯ ಚುನಾವಣೆಗಳನ್ನು ನಡೆಸುವುದಕ್ಕೆ ಮತ್ತು ಮತದಾರರ ಪಟ್ಟಿಗಳನ್ನು ತಯಾರಿಸುವುದಕ್ಕೆ ಸಂಬಂಧಿಸಿದಂತೆ ಸಹಕಾರ ಚುನಾವಣಾ ಆಯೋಗ ವಹಿಸಿಕೊಡಬಹುದಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದಾಗಿದೆ.

1. ಜಿಲ್ಲೆಯ ಎಲ್ಲಾ ಸಹಕಾರ ಸಂಘಗಳಿಗೆ ಆಡಳಿತ ಮಂಡಳಿ / ಪದಾಧಿಕಾರಿಗಳ ಚುನಾವಣೆಯನ್ನು ನಡೆಸಲು ಜಿಲ್ಲಾ ಚುನಾವಣಾಧಿಕಾರಿಯಾಗಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ನೇಮಕ ಮಾಡಬೇಕೆಂದು ಮತ್ತು ಚುನಾವಣೆಗೆ ಸಂಬಂಧಿಸಿದಂತೆ ಸಂಪೂರ್ಣ ಜವಾಬ್ದಾರಿಯನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ವಹಿಸಬೇಕೆಂದು ನಿರ್ಧರಿಸಲಾಗಿತ್ತು. ಆದರೆ ಜಿಲ್ಲಾಧಿಕಾರಿಗಳಿಗೆ ಈಗಿರುವ ಲೋಕಸಭೆ, ವಿಧಾನಸಭೆ, ವಿಧಾನಪರಿಷತ್, ನಗರ ಪಾಲಿಕೆ, ಜಿಲ್ಲಾ ಪಂಚಾಯತ್ ಹಾಗೂ ಇನ್ನಿತರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಜವಾಬ್ದಾರಿ ಇರುವುದರಿಂದ, ಸಹಕಾರ ಚುನಾವಣಾ ಆಯೋಗ ಹೊಸದಾಗಿ ಕಾರ್ಯನಿರ್ವಹಿಸಲು ಪ್ರಾರಂಭ ಮಾಡಿರುವುದರಿಂದ ಈ ಒಂದು ಬಾರಿಗೆ ಸಹಕಾರ ಇಲಾಖೆಯ ಅಧಿಕಾರಿಗಳ ಮೂಲಕ ಚುನಾವಣೆ ನಡೆಸಲು ಸಾಧ್ಯವಾಗುವುದೇ ಎನ್ನುವ ಬಗ್ಗೆ ಪ್ರಯೋಗಾತ್ಮಕವಾಗಿ ಪ್ರಾಥಮಿಕ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಮುಂದಿನ ಆದೇಶದವರೆಗೆ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕರಿಗೆ ಚುನಾವಣೆ ನಿರ್ವಹಣಾಕಾರ್ಯವನ್ನು ವಹಿಸಬೇಕೆಂದು ತೀರ್ಮಾನಿಸಲಾಯಿತು. ಅದರಂತೆ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಪ್ರಸ್ತುತ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ಅಧಿನಿಯಮ 2012 ರ ಅವಕಾಶದಂತೆ ಎರಡನೇ ಹಂತದಲ್ಲಿ ಮಾಧ್ಯಮಿಕ ಸಂಘಗಳಿಗೆ 2013 ರ ಅಕ್ಟೋಬರ್ 31 ರ ಒಳಗೆ ಮತ್ತು ಮೂರನೇ ಹಂತದಲ್ಲಿ ಫೆಡರಲ್ ಸಂಘಗಳಿಗೆ ಸಂಬಂಧಪಟ್ಟಂತೆ 2013 ರ ನವೆಂಬರ್ 30ಕ್ಕೆ ಮುಂಚೆ ಚುನಾವಣೆಯನ್ನು ನಡೆಸತಕ್ಕಾಗಿದೆ.

ಎರಡನೇ ಹಾಗೂ ಮೂರನೇ ಹಂತದಲ್ಲಿ ಚುನಾವಣೆಗೆ ಬಾಕಿ ಇರುವ ಟಿ.ಎ.ಪಿ.ಸಿ.ಎಂ.ಎಸ್ ಇನ್ನಿತರ ಸಂಘಗಳು, ಡಿ.ಸಿ.ಸಿ ಬ್ಯಾಂಕುಗಳು, ಜಿಲ್ಲಾ ಹಾಲು ಒಕ್ಕೂಟಗಳು, ಇನ್ನಿತರ ಜಿಲ್ಲಾ ಮಟ್ಟದ ಸಹಕಾರ ಸಂಘಗಳು, ಸಹಕಾರ ಸಕ್ಕರೆ ಕಾರ್ಖಾನೆಗಳಿಗೆ, ಚುನಾವಣೆಯನ್ನು ನಡೆಸಬೇಕಾಗಿರುತ್ತದೆ. ತಾಲ್ಲೂಕು/ಜಿಲ್ಲಾ ಮಟ್ಟದ ಸಂಘಗಳು/ ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿ ಚುನಾವಣೆಗಳು/ಪದಾಧಿಕಾರಿಗಳ ಚುನಾವಣೆಗಳು ಬಹಳ ಮಹತ್ವದ್ದಾಗಿದ್ದು, ಸಕ್ಕರೆ ಕಾರ್ಖಾನೆಗಳಲ್ಲಿ ಸಹಸ್ರಾರು ಸದಸ್ಯರುಗಳಿದ್ದು ಕಾನೂನು ಮತ್ತು ಶಿಸ್ತುಪಾಲನೆಯು ಪ್ರಮುಖ ಅಂಶವಾಗಿರುವ ಹಿನ್ನೆಲೆಯಲ್ಲಿ ಯಾವ ಜಿಲ್ಲೆಯ ಕೇಂದ್ರ ಸ್ಥಾನದಲ್ಲಿ/ಜಿಲ್ಲಾ ವ್ಯಾಪ್ತಿಯಲ್ಲಿ ಸಹಕಾರ ಸಂಘಗಳು ಕೇಂದ್ರ ಸ್ಥಾನವನ್ನು ಹೊಂದಿರುತ್ತವೆಯೋ ಆ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು

----3

ಜಿಲ್ಲಾ ಚುನಾವಣಾಧಿಕಾರಿಯನ್ನಾಗಿ ನೇಮಿಸುವುದು ಸೂಕ್ತವೆಂದು ಆಯೋಗ ನಿರ್ಧರಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**-:ಆದೇಶ:-**

**ಸಚುಆ/16/2013-14** **ದಿನಾಂಕ:02.08.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾಧ್ಯಮಿಕ ಸಹಕಾರ ಸಂಘಗಳು / ಫೆಡರಲ್ ಸಹಕಾರ ಸಂಘಗಳಿಗೆ ಸಂಬಂಧಿಸಿದಂತೆ, ಸಂಬಂಧಿಸಿದ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರು ಸಿದ್ದಪಡಿಸಿ ಸಲ್ಲಿಸಿದ ಮತದಾರರ ಪಟ್ಟಿಯನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಪರಿಶೀಲಿಸಿ ಸಿದ್ದಪಡಿಸಲು ಮತ್ತು ಚುನಾವಣಾ ಆಯೋಗದ ಪರವಾಗಿ ಎರಡನೇ ಹಂತದಲ್ಲಿ ಮಾಧ್ಯಮಿಕ ಸಹಕಾರ ಸಂಘಗಳಿಗೆ ಹಾಗೂ ಮೂರನೇ ಹಂತದಲ್ಲಿ ಫೆಡರಲ್ ಸಹಕಾರ ಸಂಘಗಳ ಆಡಳಿತ ಮಂಡಳಿ /ಪದಾಧಿಕಾರಿಗಳ ಚುನಾವಣೆಯನ್ನು ಸಮರ್ಪಕವಾಗಿ ನಡೆಸಲು, ಶ್ರೀ ಎನ್.ಸಿ. ಮುನಿಯಪ್ಪ ಆಯುಕ್ತರು, ಸಹಕಾರ ಚುನಾವಣಾ ಆಯೋಗ ಆದ ನಾನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 39 ಎ (1) ಮತ್ತು ಪ್ರಕರಣ 39 ಎಎ (2), ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 26 ಎ ಹಾಗೂ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 2(i-1) ರ ಅಡಿಯಲ್ಲಿ ಅಂತರ್ಗತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳನ್ನು ಅವರ ವ್ಯಾಪ್ತಿಯಲ್ಲಿ ಬರುವ ಮಾಧ್ಯಮಿಕ ಹಾಗೂ ಫೆಡರಲ್ ಸಹಕಾರ ಸಂಘಗಳ ಆಡಳಿತ ಮಂಡಳಿ / ಪದಾಧಿಕಾರಿಗಳ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲಾ ಚುನಾವಣಾಧಿಕಾರಿಯಾಗಿ ಮುಂದಿನ ಆದೇಶದವರೆಗೆ ನೇಮಿಸಿರುತ್ತೇನೆ. ಜಿಲ್ಲಾ ಚುನಾವಣಾಧಿಕಾರಿಗಳು, ಸಹಾಯಕ ಚುನಾವಣಾಧಿಕಾರಿಗಳ ನೆರವಿನೊಂದಿಗೆ ಅನುಬಂಧದಲ್ಲಿ ಸೂಚಿಸಿರುವ ನಿರ್ದೇಶನ ಮತ್ತು ಮಾರ್ಗಸೂಚಿಗಳಂತೆ ಕಾರ್ಯನಿರ್ವಹಿಸಿ ಸಹಕಾರ ಸಂಘಗಳು/ಸೌಹಾರ್ದ ಸಹಕಾರಿ ಅಧಿನಿಯಮ, ಕರ್ನಾಟಕ ಸಹಕಾರ ಸಂಘಗಳ ನಿಯಮಗಳು /ಸಂಘದ ಬೈಲಾ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಚುನಾವಣಾ ಪ್ರಕಾರ್ಯಗಳನ್ನು ನಿರ್ವಹಿಸಲು ಆದೇಶಿಸಿದೆ.

(ಎನ್.ಸಿ.ಮುನಿಯಪ್ಪ)
ಆಯುಕ್ತರು
ರಾಜ್ಯ ಸಹಕಾರ ಚುನಾವಣಾ ಆಯೋಗ
ಬೆಂಗಳೂರು

**ಇವರಿಗೆ:-**

ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,

**ಪ್ರತಿಗಳು:-**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-01
2. ಮಾನ್ಯ ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ , ಬೆಂಗಳೂರು -560052.
3. ಮಾನ್ಯ ಸಹಕಾರ ಸಂಘಗಳ ಅಪರ ನಿಬಂಧಕರು (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು.
4. ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು,
5. ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು................ವಿಷಯದ ಬಗ್ಗೆ ಜಿಲ್ಲಾಧಿಕಾರಿಗಳನ್ನು ಸಂಪರ್ಕಿಸಲು ಸೂಚಿಸಿದೆ.
6. ಎಲ್ಲಾ ಉಪವಿಭಾಗೀಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು
7. ಕಛೇರಿ ಆದೇಶ / ರಕ್ಷಾ ಕಡತ.

# ಅನುಬಂಧ

1) ನಿಯಮ 13ಸಿ ಅನ್ವಯ ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ, ನಿಯಂತ್ರಣ ಹಾಗೂ ನಿರ್ದೇಶನಗಳಿಗೊಳಪಟ್ಟು ಜಿಲ್ಲೆಯೊಳಗೆ ನೋಂದಾಯಿತ ಕಛೇರಿಗಳನ್ನು ಹೊಂದಿರುವ ಎಲ್ಲಾ ಮಾಧ್ಯಮಿಕ ಹಾಗೂ ಫೆಡರಲ್ ಸಹಕಾರ ಸಂಘಗಳ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಸಂಬಂಧ ಮೇಲ್ವಿಚಾರಣೆ ನಡೆಸುವುದು ಮತ್ತು ಆಯೋಗವು ಈ ಸಂಬಂಧ ವಹಿಸುವ ಕೆಲಸಗಳನ್ನು ನಿರ್ವಹಿಸತಕ್ಕದ್ದು.

2) ನಿಯಮ 13ಸಿ(2) ಅನ್ವಯ ಸಹಕಾರ ಚುನಾವಣಾ ಆಯೋಗಕ್ಕೆ ನಿಯೋಜಿಸುವ ಜಿಲ್ಲಾ ಚುನಾವಣಾಧಿಕಾರಿ ಸೇರಿದಂತೆ ಸರ್ಕಾರದ ಅಧಿಕಾರಿಗಳು ಮತ್ತು ನೌಕರರು, ಆಯೋಗದಿಂದ ಚುನಾವಣಾ ವೇಳಾ ಪಟ್ಟಿ ಪ್ರಕಟಗೊಂಡ ದಿನಾಂಕದಿಂದ ಚುನಾವಣಾ ಪ್ರಕ್ರಿಯೆ ಮುಗಿದು, ಚುನಾವಣಾ ಫಲಿತಾಂಶ ಪ್ರಕಟವಾಗುವವರೆಗೆ ಸಹಕಾರ ಚುನಾವಣಾ ಆಯೋಗಕ್ಕೆ ನಿಯೋಜನೆಗೊಂಡಿರುತ್ತಾರೆಂದು ಭಾವಿಸತಕ್ಕದ್ದು.

3) ನಿಯಮ 13ಡಿ ಅನ್ವಯ ಅಗತ್ಯ ಕ್ರಮ ಕೈಗೊಂಡು, ಸಹಕಾರ ಚುನಾವಣಾ ಆಯೋಗಕ್ಕೆ ಗೊತ್ತುಪಡಿಸಲಾಗಿರುವ ಕೆಲಸಕಾರ್ಯಗಳನ್ನು ಆಯೋಗದ ಪರವಾಗಿ ಜಿಲ್ಲಾ ಚುನಾವಣಾಧಿಕಾರಿಯಾಗಿರುವ ನೀವು ನಿಮ್ಮ ಹಂತದಲ್ಲಿ ನಿರ್ವಹಿಸುವಂತೆ ನಿರ್ದೇಶಿಸಲಾಗಿದೆ.

4) ನಿಯಮ 13ಇ ರೀತ್ಯಾ ಸಹಕಾರ ಚುನಾವಣಾ ಆಯೋಗವು ಸಹಕಾರ ಸಂಘಗಳ ಆಡಳಿತ ಮಂಡಳಿಗೆ/ಪದಾಧಿಕಾರಿಗಳ ಸ್ಥಾನಗಳಿಗೆ ಚುನಾವಣೆ ನಡೆಸುವ ಸಂಬಂಧ ರಿಟರ್ನಿಂಗ್ ಆಫೀಸರ್‌ಗಳನ್ನು ನೇಮಕ ಮಾಡುತ್ತಿದ್ದು, ನಿಯಮಗಳಲ್ಲಿ ಗೊತ್ತುಪಡಿಸಿರುವಂತೆ, ಅವರು ತಮ್ಮ ಕೆಲಸಕಾರ್ಯಗಳನ್ನು ಕಾನೂನಿಗೆ ಅನುಗುಣವಾಗಿ ಹಾಗೂ ಸಮರ್ಪಕವಾಗಿ ನಿರ್ವಹಿಸುತ್ತಿರುವ ಬಗ್ಗೆ ಮೇಲ್ವಿಚಾರಣೆ ನಡೆಸುವುದು.

5) ನಿಯಮ 13ಎಫ್ ರನ್ವಯ ಜಿಲ್ಲಾ ಚುನಾವಣಾಧಿಕಾರಿಯು ಪ್ರತಿಯೊಂದು ಮತದಾನ ಕೇಂದ್ರಕ್ಕಾಗಿ ಒಬ್ಬ ಪ್ರಿಸ್ಯೈಡಿಂಗ್ ಆಫೀಸರ್‌ನ್ನು (ಅಧ್ಯಕ್ಷಾಧಿಕಾರಿ) ಮತ್ತು ತಾನು ಅವಶ್ಯವೆಂದು ಭಾವಿಸುವಂಥ ಪೋಲಿಂಗ್ ಅಧಿಕಾರಿ ಅಥವಾ ಅಧಿಕಾರಿಗಳನ್ನು ನೇಮಕ ಮಾಡಬಹುದು.

6) ಈಗಾಗಲೇ ತಿಳಿಸಿರುವಂತೆ ನಿಯಮ 14 ರ ಮೇರೆಗೆ ಜಿಲ್ಲಾ ಚುನಾವಣಾಧಿಕಾರಿಯು ಸಹಕಾರ ಚುನಾವಣಾ ಆಯೋಗದ ಅನುಮೋದನೆ ಪಡೆದು ಸಹಕಾರ ಸಂಘಗಳ ಸಾಮಾನ್ಯ ಚುನಾವಣೆ ಸಂಬಂಧ ನಮೂನೆ XI ರಲ್ಲಿ ಅಧಿಸೂಚನೆಯನ್ನು ಹೊರಡಿಸತಕ್ಕದ್ದು. ಸದರಿ ಅಧಿಸೂಚನೆಯಲ್ಲಿ 14(2) ರಲ್ಲಿ ನಿಗದಿಪಡಿಸಿರುವಂತೆ ವಿವರಗಳು ಇರತಕ್ಕದ್ದು. ಅಲ್ಲದೇ ನಿಯಮ 14(3) ರೀತ್ಯಾ ರಿಟರ್ನಿಂಗ್ ಆಫೀಸರ್ ಅಗತ್ಯ ಕ್ರಮವಿಡುವ ಬಗ್ಗೆ ನೋಡಿಕೊಳ್ಳುವುದು.

7) ನಿಮ್ಮ ವ್ಯಾಪ್ತಿಯಲ್ಲಿ ಬರುವ ಮಾಧ್ಯಮಿಕ ಹಾಗೂ ಫೆಡರಲ್ ಸಹಕಾರ ಸಂಘಗಳಿಗೆ ರಿಟರ್ನಿಂಗ್ ಆಫೀಸರ್ ನೇಮಿಸುವ ಸಂಬಂಧ ವ್ಯಾಪ್ತಿಯ ಸಹಕಾರ ಸಂಘಗಳ ಜಂಟಿ ನಿಬಂಧಕರು/ ಜಿಲ್ಲೆಯ ಉಪನಿಬಂಧಕರೊಡನೆ ಸಮಾಲೋಚಿಸಿ, ನಿರ್ದಿಷ್ಟ ಅಧಿಕಾರಿಯನ್ನು ರಿಟರ್ನಿಂಗ್ ಆಫೀಸರ್/ಸಹಾಯಕ ರಿಟರ್ನಿಂಗ್ ಆಫೀಸರ್ ಆಗಿ ನೇಮಿಸಲು ಪ್ರಸ್ತಾವನೆ ಕಳುಹಿಸಿದಲ್ಲಿ ಆಯೋಗವು ರಿಟರ್ನಿಂಗ್ ಆಫೀಸರ್/ ಸಹಾಯಕ ಚುನಾವಣಾಧಿಕಾರಿಯನ್ನು ನೇಮಿಸಿ ಆದೇಶ ಹೊರಡಿಸುತ್ತದೆ.

8) ರಿಟರ್ನಿಂಗ್ ಆಫೀಸರ್ಸ್/ಅಧ್ಯಕ್ಷಾಧಿಕಾರಿಗಳು/ಮತದಾನ ಅಧಿಕಾರಿಗಳು/ನೌಕರರಿಗೆ ತಮ್ಮ ಕೆಲಸಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವ ಕುರಿತು ಸೂಕ್ತ ತರಬೇತಿ ವ್ಯವಸ್ಥೆ ಮಾಡುವುದು.

9) ನಿಯಮ 14ಎಜಿ ಅನ್ವಯ, ರಿಟರ್ನಿಂಗ್ ಆಫೀಸರ್ ಆಡಳಿತ ಮಂಡಳಿಗೆ ಚುನಾವಣೆ ನಡೆಸಿದ ನಂತರ, ಪದಾಧಿಕಾರಿಗಳ ಚುನಾವಣೆಯನ್ನು ಅವರೇ ನಡೆಸತಕ್ಕದ್ದಾಗಿದ್ದು ಈ ಸಂಬಂಧ ಸೂಕ್ತ ಸೂಚನೆಗಳನ್ನು ನೀಡುವುದು.

10) ಪ್ರತಿ ಸಹಕಾರ ಸಂಘದ ಮತದಾರರ ಪಟ್ಟಿಯನ್ನು ಸಂಬಂಧಿಸಿದ ಸಂಘದಲ್ಲಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯ ಕಛೇರಿಯಲ್ಲಿ ವೀಕ್ಷಣೆಗೆ ಮುಕ್ತವಾಗಿಟ್ಟಿರತಕ್ಕದ್ದು.

11) ಜಿಲ್ಲಾ ಚುನಾವಣಾಧಿಕಾರಿಯು, ಸಹಕಾರ ಸಂಘಗಳ ಅಧಿನಿಯಮ/ನಿಯಮಗಳನ್ನು ಗಮನದಲ್ಲಿಟ್ಟುಕೊಂಡು ಸಹಕಾರ ಚುನಾವಣಾ ಆಯೋಗವು ಆಗಾಗ್ಗೆ ನೀಡುವ ನಿರ್ದೇಶನಗಳಂತೆ ಅಗತ್ಯ ಕ್ರಮವಿಡುವುದು.

(ಎನ್.ಸಿ. ಮುನಿಯಪ್ಪ)
ಸಹಕಾರ ಚುನಾವಣಾ ಆಯುಕ್ತರು